ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 30 ಬಿಎಲ್‌ಡಿ 2010
ಅಡಕ: ಸರ್ಕಾರದ ಪತ್ರ

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:07-01-2020.

: ಸುತ್ತೋಲೆ :

**ವಿಷಯ:** ಸರ್ಕಾರಿ ಇಂಜನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಇರುವ ಉಪಾಹಾರ ಗೃಹಗಳ ಮಾಹಿತಿ ನೀಡುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ:ಇಡಿ 18 ಹೆಚ್‌ಪಿಟಿ 2019 ದಿನಾಂಕ:04-01-2020.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸರ್ಕಾರಿ ಪತ್ರದಲ್ಲಿ ರಾಜ್ಯದಲ್ಲಿ ಇರುವ ಪಾಲಿಟೆಕ್ನಿಕ್ ಮತ್ತು ಇಂಜನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು ಎಷ್ಟು ಉಪಾಹಾರ ಗೃಹಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಬಾಡಿಗೆ ನೀಡುತ್ತಿದ್ದಾರೆ ಹಾಗೂ ಉಪಾಹಾರ ಗೃಹಕ್ಕೆ ಸಂಬಂಧಿಸಿದಂತೆ ಯಾವುದಾದರೂ ದೂರು/ಪ್ರಕರಣ ಇತ್ಯಾಧಿಗಳು ದಾಖಲಾಗಿದೆಯೇ, ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟ ಉಂಟಾಗಿದೆ ಎಂಬುದರ ಬಗ್ಗೆ ವಿವರಣೆ ನೀಡಲು ಸೂಚಿಸಿದ್ದು, ಸದರಿ ಮಾಹಿತಿಯನ್ನು ಸ್ಪಷ್ಟವಾಗಿ ಜರೂರು ನೀಡಲು ಸೂಚಿಸಲಾಗಿದೆ.

C. D. Ramalingaiah

**ನಿರ್ದೇಶಕರು,**
ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001.

ಕರಡು ನಿರ್ದೇಶಕರಿಂದ ಅನುಮೋದಿಸಿದೆ.

ಇವರಿಗೆ:

1. ಪ್ರಿನ್ಸಿಪಾಲರು, ಸರ್ಕಾರಿ ಇಂಜನಿಯರಿಂಗ್ ಕಾಲೇಜು / ಸರ್ಕಾರಿ ಪಾಲಿಟೆಕ್ನಿಕ್‌ಗಳು ಅಗತ್ಯ ಕ್ರಮಕ್ಕೆ.
2. ಇ-ಆಡಳಿತ ವಿಭಾಗಕ್ಕೆ - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.

**ಕರ್ನಾಟಕ ಸರ್ಕಾರ**

ಇಡಿ 18 ಹೆಚ್‌ಪಿಟಿ 2019

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿ:04.01.2020

**ಜರೂರು**

**ಇವರಿಂದ,**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು.

**ಇವರಿಗೆ,**
ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು.

ಮಾನ್ಯರೆ,

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯ ಎಸ್.ಜೆ (ಸರ್ಕಾರಿ) ಪಾಲಿಟೆಕ್ನಿಕ್ ಸಂಸ್ಥೆಯ ಅವರಣದ ಉಪಹಾರ ಗೃಹವನ್ನು ಬಾಡಿಗೆ/ಗುತ್ತಿಗೆ ಆಧಾರದ ಮೇಲೆ ನೀಡುವ ಕುರಿತು

ಉಲ್ಲೇಖ: ತಮ್ಮ ಪತ್ರ ಸಂಖ್ಯೆ: ಡಿಟಿಇ 30 ಬಿಎಲ್‌ಡಿ 2010 ದಿನಾಂಕ:06.12.2019.

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಕೋರಿರುವ ಬಗ್ಗೆ ಪರಿಶೀಲಿಸಲು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯ ಎಸ್.ಜೆ (ಸರ್ಕಾರಿ) ಪಾಲಿಟೆಕ್ನಿಕ್ ಸಂಸ್ಥೆಯ ಅವರಣದ ಉಪಹಾರ ಗೃಹದ ಗುತ್ತಿಗೆ ನೀಡುವ ಬಗ್ಗೆ ಟೆಂಡರ್ ಕರೆಯಲಾಗಿದೆಯೇ? ಯಾರ ಹಂತದಲ್ಲಿ ಟೆಂಡರ್ ಕರೆಯಲಾಗಿದೆ, ನ್ಯಾಯಾಲಯದಲ್ಲಿ ಯಾವಾಗ ಪ್ರಕರಣ ದಾಖಲಾಯಿತು ಮತ್ತು ಪ್ರಕರಣದಲ್ಲಿ ಮೊದಲ ಪಾರ್ಟಿ ಯಾರು? ಪ್ರಕರಣದ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆಯೇ? ಇಷ್ಟು ಹಣ ಬಾಕಿ ಉಳಿಸಿಕೊಳ್ಳಲು ಯಾರು ಕಾರಣರು? ಗುತ್ತಿಗೆದಾರರಿಗೆ ಎಷ್ಟು ನೋಟಿಸ್‌ನ್ನು ನೀಡಲಾಗಿದೆ, ಉಪಹಾರ ಗೃಹದ ಗುತ್ತಿಗೆದಾರರಿಂದ ಇದುವರೆವಿಗೂ ಬಾಡಿಗೆ/ಬಾಕಿ ವಸೂಲು ಮಾಡಲು ಕ್ರಮವಹಿಸದೇ ಇರುವ ಬಗ್ಗೆ ಕಾರಣ ನೀಡುವಂತೆ ಹಾಗೂ ಇದಕ್ಕೆ ಕಾರಣರಾದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬ ಮಾಹಿತಿಯನ್ನು ಒಂದು ವಾರದೊಳಗಾಗಿ ಸಲ್ಲಿಸುವಂತೆ ಹಾಗೂ ರಾಜ್ಯದಲ್ಲಿ ಇರುವ ಪಾಲಿಟೆಕ್ನಿಕ್ ಮತ್ತು ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು ಎಷ್ಟು ಉಪಹಾರ ಗೃಹಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಬಾಡಿಗೆ ನೀಡುತ್ತಿದ್ದಾರೆ ಎಂಬ ಬಗ್ಗೆ ಸವಿವರ ಮಾಹಿತಿಯನ್ನು ಸಲ್ಲಿಸುವಂತೆ ಹಾಗೂ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ರೀತಿ ಎಷ್ಟು ಪ್ರಕರಣಗಳಿವೆ, ಇದರಿಂದ ಸರ್ಕಾರದ ಬೊಕ್ಕಸಕ್ಕೆ ಎಷ್ಟು ನಷ್ಟ ಉಂಟಾಗಿದೆ ಎಂಬ ಬಗ್ಗೆ ೧೫ ದಿನಗಳೊಳಗಾಗಿ ಸರ್ಕಾರಕ್ಕೆ ವರದಿ/ಮಾಹಿತಿ ಸಲ್ಲಿಸುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಎನ್. ಆರ್. ಪರೆಕುಪ್ಪಿ)
ಆಂತರಿಕ ಆರ್ಥಿಕ ಸಲಹೆಗಾರರು
ಮತ್ತು ಸರ್ಕಾರದ ಉಪ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ